

ಆಸಕ್ತ ಕಲಾತಂಡದಿಂದ ರಂಗ ಶಂಕರದಲ್ಲಿ ಮೂರು ದಿನಗಳ ಸರಣಿ ನಾಟಕ ಪ್ರದರ್ಶನ ನಡೆಯಲಿದ್ದು, ನ. 16ರಿಂದ ಚಾಲನೆ ಸಿಗಲಿದೆ. ಮ್ಯಾಥಮೆಜಿಷಿಯನ್, ಗಜಬ್ ಕಹಾನಿ, ಮೈನ್ ಹೂನ್ ಯೂಸುಫ್ ಔರ್ ಎ ಹಾಯ್ ಮೆರಾ ಭಾಯ್ ನಾಟಕಗಳು ಪ್ರದರ್ಶಿತವಾಗಲಿವೆ.

## ಸೈಬರ್ ಕ್ರೈಂ ಠಾಣೆ ಎಫ್‌ಐಆರ್ ರದ್ದು ಕೋರಿ ಶ್ರುತಿ ಹರಿಹರನ್ ಅರ್ಜಿ



**ಬೆಂಗಳೂರು:** ಮಿ–ಟೂ ಆರೋಪದ ಹಿನ್ನೆಲೆ ನಟ ಅರ್ಜುನ್ ಸರ್ಜಾ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ದಾಖಲಿಸಿರುವ ಎಫ್‌ಐಆರ್ ರದ್ದು ಕೋರಿ ನಟಿ ಶ್ರುತಿ ಹರಿಹರನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಅರ್ಜುನ್ ಸರ್ಜಾ ಅವರು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಮರ್ಯಾದೆ ಹಾಳು ಮಾಡಿದರೆಂದು ಸೈಬರ್ ಕ್ರೈಂ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಮೇರೆಗೆ ಸೈಬರ್ ಕ್ರೈಂ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದರು. ಈ ಪ್ರಕರಣ ದುರುದ್ದೇಶವಾಗಿದ್ದು, ಎಫ್‌ಐಆರ್ ರದ್ದು ಮಾಡುವಂತೆ ಶ್ರುತಿ ಹರಿಹರನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

## ಮಾಣಿಪ್ಪಾಡಿ ವರದಿ ಕುರಿತ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆ ಮುಂದೂಡಿಕೆ

**ಬೆಂಗಳೂರು:** ವಕ್ಫ್ ಮಂಡಳಿ ಸ್ಥಿರಾಸ್ತಿ ಕಬಳಿಕೆ ಆರೋಪ ಸಂಬಂಧ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ವರದಿಯನ್ನು ಸದನದಲ್ಲಿ ಮಂಡಿಸಲು ವಿಳಂಬ ಮಾಡಿದ ವಿಚಾರಕ್ಕೆ ಸಂಬಂಧಿಸಿದಂತೆ ಸಲ್ಲಿಕೆಯಾಗಿರುವ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ನ. 27ಕ್ಕೆ ಮುಂದೂಡಿದೆ.

ಹೈಕೋರ್ಟ್ ಆದೇಶ ಮರುಪರಿಶೀಲನೆಗೆ ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ಬಾಕಿ ಇರುವ ಹಿನ್ನೆಲೆಯಲ್ಲಿ ನ್ಯಾಯಾಂಗ ನಿಂದನೆ ಅರ್ಜಿಯಲ್ಲಿ ಯಾವುದೇ ಕ್ರಮಕ್ಕೆ ಮುಂದಾಗಬಾರದೆಂದು ಸರ್ಕಾರ ಮನವಿ ಮಾಡಿಕೊಂಡಿದೆ.

ಮರುಪರಿಶೀಲನೆ ಅರ್ಜಿ ಸಂಬಂಧ ಸರ್ಕಾರ ಶೀಘ್ರ ಯಾವುದಾದರೂ ಆದೇಶ ಪಡೆದುಕೊಳ್ಳಬೇಕು. ಇಲ್ಲವಾದರೆ ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ ಹೈಕೋರ್ಟ್ ಅರ್ಜಿ ವಿಚಾರಣೆಯನ್ನು ನ. 27ಕ್ಕೆ ಮುಂದೂಡಿದೆ.



## ಮನೆ ಮುಂದೆ ನಿಂತಿದ್ದ ಮಹಿಳೆ ಸರ ದೋಚಿ ಪರಾರಿ

**ಬೆಂಗಳೂರು:** ಮನೆ ಮುಂದೆ ಸ್ನೇಹಿತರೊಂದಿಗೆ ಮಾತನಾಡುತ್ತಾ ನಿಂತಿದ್ದ ಮಹಿಳೆಯ 80 ಗ್ರಾಂ ಸರವನ್ನು ಹಾಡಹಗಲೇ ಸರಗಳ್ಳರು ಎಗರಿಸಿರುವ ಘಟನೆ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಅನ್ನಪೂರ್ಣೇಶ್ವರಿ ನಗರದ ಲಕ್ಷ್ಮೀ ಕಲ್ಯಾಣಮಂಟಪ ಸಮೀಪದ ನಿವಾಸಿ ವೀರಮ್ಮ ಎಂಬುವವರು ನಿನ್ನೆ ಬೆಳಿಗ್ಗೆ 8.20ರಲ್ಲಿ ತಮ್ಮ ಸ್ನೇಹಿತರ ಜೊತೆ ಮಾತನಾಡುತ್ತಾ ನಿಂತಿದ್ದರು. ಈ ಸಂದರ್ಭದಲ್ಲಿ ಬೈಕ್‌ನಲ್ಲಿ ಬಂದ ಇಬ್ಬರು ಸರಗಳ್ಳರ ಪೈಕಿ ಒಬ್ಬಾತ ವೀರಮ್ಮ ಅವರ ಕೊರಳಿಗೆ ಕೈ ಹಾಕಿ 80 ಗ್ರಾಂ ಸರವನ್ನು ಎಳೆದುಕೊಂಡು ಕ್ಷಣಾರ್ಧದಲ್ಲಿ ಕಣ್ಮರೆಯಾಗಿದ್ದಾರೆ. ಸಹಾಯಕ್ಕಾಗಿ ಕೂಗಿಕೊಂಡರಾದರೂ ಪ್ರಯೋಜನವಾಗಿಲ್ಲ. ಘಟನೆ ಸಂಬಂಧ ವೀರಮ್ಮ ಅವರು ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಸರಗಳ್ಳರಿಗಾಗಿ ಶೋಧ ಕೈಗೊಂಡಿದ್ದಾರೆ.

## ರಾಮಮಂದಿರ ನಿರ್ಮಾಣಕ್ಕೆ ಒತ್ತಡ ಹೇರಲು ರಾಜ್ಯದ ನಾಲ್ಕು ಕಡೆ ಸಂಘ ಪರಿವಾರದ ಸಮಾವೇಶ

**ಬೆಂಗಳೂರು:** ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ಕರಾವಳಿ ಸೇರಿದಂತೆ ರಾಜ್ಯದ ನಾಲ್ಕು ಕಡೆ ಬೃಹತ್ ಸಮಾವೇಶಗಳನ್ನು ನಡೆಸಲು ಸಂಘ ಪರಿವಾರ ಮುಂದಾಗಿದೆ. ವಿಶ್ವ ಹಿಂದೂ ಪರಿಷತ್‌ನ ರಾಜ್ಯಾಧ್ಯಕ್ಷ ಎಂ.ಬಿ. ಪುರಾಣಿಕ್ ರಾಮಮಂದಿರ ನಿರ್ಮಾಣದ ಬೇಡಿಕೆ ಮುಂದಿಟ್ಟುಕೊಂಡು ಕರಾವಳಿಯಲ್ಲಿ ಮೊದಲ ಹಂತದಲ್ಲಿ ಸಮಾವೇಶಗಳನ್ನು ಆಯೋಜಿಸಿರುವುದಾಗಿ ತಿಳಿಸಿದ್ದಾರೆ.

ಕಾಸರಗೋಡಿನಲ್ಲಿ ನ. 18ರಂದು, ಮಂಗಳೂರಿನಲ್ಲಿ ನ. 25ರಂದು, ಕೊಡಗಿನಲ್ಲಿ ನ. 30ರಂದು, ಉಡುಪಿ ಡಿ. 2ರಂದು ಸಮಾವೇಶಗಳನ್ನು ಆಯೋಜಿಸಲಾಗಿದೆ. ಈ ಸಮಾವೇಶದಲ್ಲಿ ದೇಶದ ಸಾಧು–ಸಂತರು ಭಾಗವಹಿಸಲಿದ್ದಾರೆ.

## ದೀಪಾವಳಿ ನಂತರವೂ ಪಟಾಕಿ ಅವಘಡ: ಐದು ಮಂದಿ ಕಣ್ಣಿಗೆ ಗಂಭೀರ ಗಾಯ

**ಬೆಂಗಳೂರು:** ದೀಪಾವಳಿ ಹಬ್ಬ ಮುಗಿದು ನಾಲ್ಕೈದು ದಿನ ಕಳೆದರೂ ಪಟಾಕಿಯ ಅಬ್ಬರ ಮಾತ್ರ ಕಡಿಮೆ ಆಗಿಲ್ಲ. ಪಟಾಕಿ ಸಿಡಿತಕ್ಕೆ ಗಾಯಗೊಂಡವರ ಸಂಖ್ಯೆ ಏರುತ್ತಲೇ ಇದೆ. ಬೆಂಗಳೂರಿನ ಮಿಂಟೋ ಆಸ್ಪತ್ರೆಯಲ್ಲಿ 5 ಪಟಾಕಿ ಸಿಡಿತ ಪ್ರಕರಣ ಮತ್ತೆ ದಾಖಲಾಗಿದೆ. ಮೊಹ್ಮದ್ ಅನುತಹೀರ್ ಬೇಗ್ (6) ಎಂಬ ಬಾಲಕನಿಗೆ ಹೂಕುಂಡ ಸಿಡಿತದಿಂದ ಕಣ್ಣಿಗೆ ಗಂಭೀರ ಗಾಯವಾಗಿದೆ. ಜೊತೆಗೆ ರವಿ (26), ಜಗದೀಶ್ (26), ಶರತ್ (26), ಲಕ್ಷ್ಮಣ (42) ಅವರಿಗೆ ಕೂಡ ಪಟಾಕಿ ಸಿಡಿತದಿಂದ ಕಣ್ಣಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಆಸ್ಪತ್ರೆಯ ನಿರ್ದೇಶಕರು ಮಾಹಿತಿ ನೀಡಿದ್ದಾರೆ.

# ವಿವಿಗಳ ಬೋಧಕ–ಬೋಧಕೇತರ ನೇಮಕಾತಿಗೆ ಬ್ರೇಕ್!



**ಬೆಂಗಳೂರು:** ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ನಡೆಯುತ್ತಿದ್ದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ನೇಮಕಾತಿಗೆ ರಾಜ್ಯ ಸರ್ಕಾರ ತಡೆ ನೀಡಿದೆ. ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ನೂರಾರು ಹುದ್ದೆಗಳಿಗೆ ನೇಮಕಾತಿ ನಡೆಸಲು 2017ರ ಜು. 17ರಂದು ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ–136–ಯುಎನ್‌ಇ ಅಧಿಸೂಚನೆಯನ್ನು ರಾಜ್ಯ ಸರ್ಕಾರ ಹೊರಡಿಸಿತ್ತು.

ಅದರಂತೆ ನೇಮಕಾತಿ ಪ್ರಕ್ರಿಯೆಗಳು ಆರಂಭಗೊಂಡಿದ್ದವು. ಆದರೆ ಸಾರ್ವಜನಿಕರು, ಅಭ್ಯರ್ಥಿಗಳು ಹಾಗೂ ಮಾಧ್ಯಮಗಳಿಂದ ಕೇಳಿ ಬಂದ ಆಕ್ಷೇಪಣೆಗಳನ್ನು ಆಧರಿಸಿ ನೇಮಕಾತಿಗೆ ತಡೆ ನೀಡಲಾಗಿದೆ. ಯುಜಿಸಿ ನಿಯಮಾವಳಿಗಳ ಪ್ರಕಾರ ನೇಮಕಾತಿಗಳು ನಡೆಯುತ್ತಿಲ್ಲ ಎಂಬ ಆರೋಪ ಕೇಳಿ ಬಂದಿತ್ತು. ವಿವಿಗಳ ಮತ್ತು ಕಾಲೇಜುಗಳ ಶಿಕ್ಷಕರು ಮತ್ತು ಇತರ ಶೈಕ್ಷಣಿಕ ಸಿಬ್ಬಂದಿ ನೇಮಕಾತಿಗೆ ಕನಿಷ್ಠ ಅರ್ಹತೆ, ಮಾನದಂಡ ಹಾಗೂ ಉನ್ನತ ಶಿಕ್ಷಣದಲ್ಲಿ ಗುಣಮಟ್ಟ ನಿರ್ವಹಣೆ 2010ರ ಕಾಯ್ದೆಯಲ್ಲಿ ಬೋಧಕರ ನೇಮಕಾತಿಗೆ 100 ಅಂಕಗಳಿಗೆ ಲಿಖಿತ ಪರೀಕ್ಷೆ ನಡೆಸಲು ಅವಕಾಶವಿರುವುದಿಲ್ಲ. ಆದರೆ ನೇಮಕಾತಿ ಪ್ರಕ್ರಿಯೆ ನಡೆಸುತ್ತಿರುವ ವಿಶ್ವವಿದ್ಯಾನಿಲಯಗಳು ಲಿಖಿತ ಪರೀಕ್ಷೆ ಆಯೋಜಿಸಿವೆ.

ಯುಜಿಸಿ ನಿಯಮಾವಳಿಗಳ ಪ್ರಕಾರ ಅರ್ಹರಿರುವ ಎಲ್ಲಾ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗುವ ಅವಕಾಶವಿದೆ. ಆದರೆ ಇದಕ್ಕೆ ವಿರುದ್ಧವಾಗಿ ಲಿಖಿತ ಪರೀಕ್ಷೆಯ ಆಧಾರದ ಮೇಲೆ 1:3 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಹ್ವಾನಿಸಲು ಸುತ್ತೋಲೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಇದರಿಂದ ಅರ್ಹರು ನೇಮಕಾತಿ ಅವಕಾಶದಿಂದ ವಂಚಿತರಾಗುವುದಲ್ಲದೆ, ಸಾಮಾಜಿಕ ನ್ಯಾಯದ ಉಲ್ಲಂಘನೆಯಾಗುತ್ತದೆ ಎಂಬ ಆಕ್ಷೇಪಗಳು ಕೇಳಿ ಬಂದಿದ್ದವು. ಸಹ ಪ್ರಾಧ್ಯಾಪಕರ ನೇಮಕಾತಿಗೆ ಕನಿಷ್ಠ 8 ವರ್ಷಗಳ ಬೋಧನೆ ಅಥವಾ ಸಂಶೋಧನಾ ಅನುಭವವನ್ನು ಕಡ್ಡಾಯಗೊಳಿಸಲಾಗಿದೆ. ಆದರೆ ನೇರ ನೇಮಕಾತಿಯಲ್ಲಿ ವಿವಿಗಳು 5 ವರ್ಷದ ಅನುಭವವಿದ್ದರೆ ಸಾಕು ಎಂದು ತಿಳಿಸಲಾಗಿದೆ. ನೇರ ನೇಮಕಾತಿಯಿಂದ ಪಾರದರ್ಶಕತೆ ಕಾಪಾಡಲು ಸಾಧ್ಯವಾಗುವುದಿಲ್ಲ. ಸ್ವಜನ ಪಕ್ಷಪಾತಕ್ಕೆ ಅವಕಾಶ ನೀಡಿದಂತಾಗುತ್ತದೆ. ಕೆಲವು ವಿವಿಗಳು ಲಿಖಿತ ಪರೀಕ್ಷೆಯನ್ನು ಪಾರದರ್ಶಕತೆಯಿಂದ ನಡೆಸದೆ ಅಕ್ರಮ ಮಾಡಿವೆ ಎಂಬ ಆರೋಪಗಳು ಕೇಳಿ ಬಂದಿದ್ದವು.

ಸಾರ್ವಜನಿಕರು, ಅಭ್ಯರ್ಥಿಗಳು ಹಾಗೂ ತಜ್ಞರಿಂದ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ವಿಶ್ರಾಂತ ಕುಲಪತಿ ಪ್ರೊ. ವಿ.ವಿ. ಕುಟಿನ್ಹೊ ಅವರ ಅಧ್ಯಕ್ಷತೆಯ ಸಮಿತಿ ಪರಿಶೀಲಿಸಿದ್ದು, ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಈ ಹಿನ್ನೆಲೆಯಲ್ಲಿ ವಿವಿಗಳಲ್ಲಿ ನಡೆಯುತ್ತಿದ್ದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ನೇಮಕಾತಿಗೆ ತಡೆ ನೀಡಲಾಗಿದೆ. ಮುಂದಿನ ಆದೇಶದವರೆಗೂ ನೇಮಕಾತಿ ಪ್ರಕ್ರಿಯೆಗಳಿಗೆ ತಡೆಯಾಜ್ಞೆ ಇದೆ ಎಂದು ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಬೆಂಗಳೂರು ಓಪನ್–2018ಕ್ಕೆ ಚಾಲನೆ

**ಬೆಂಗಳೂರು:** 2ನೇ ಬಾರಿ ಬೆಂಗಳೂರಿನ ಟೆನ್ನಿಸ್ ಸ್ಟೇಡಿಯಂನಲ್ಲಿ ಕೆಎಸ್‌ಎಲ್‌ಟಿಎ ಹಾಗೂ ಎಸಿಟಿ ಫೈಬರ್‌ನೆಟ್ ಸಹಯೋಗದಲ್ಲಿ ಹಮ್ಮಿಕೊಂಡಿರುವ ಟೆನ್ನಿಸ್ ಟೂರ್ನಮೆಂಟ್‌ನ ಬೆಂಗಳೂರು ಓಪನ್–2018ನ್ನು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಉದ್ಘಾಟಿಸಿ, ಆಟಗಾರರಿಗೆ ಶುಭಾಶಯ ತಿಳಿಸಿದರು. ಕೇಂದ್ರ ಸಚಿವ ಅನಂತಕುಮಾರ್ ಅವರ ನಿಧನಕ್ಕೆ ಮೌನಾಚರಣೆ ಸಲ್ಲಿಸಿ, ಬಳಿಕ ಟೂರ್ನಮೆಂಟ್‌ನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಬೆಂಗಳೂರು ಕ್ರೀಡೆಗೆ ಉತ್ತೇಜನ ನೀಡುವ ನಗರವಾಗಿದೆ. ಎರಡನೇ ಬಾರಿ ಬೆಂಗಳೂರಿನಲ್ಲಿ ಟೆನ್ನಿಸ್ ಟೂರ್ನಮೆಂಟ್ ಆಯೋಜನೆ ಮಾಡಲಾಗಿದೆ. ಕಳೆದ ಬಾರಿ 100,000 ಡಾಲರ್ಸ್‌ನ ಮೊತ್ತದ ಸ್ಪರ್ಧೆಯಾಗಿತ್ತು. ಈ ಬಾರಿ 150,000 ಡಾಲರ್ಸ್ ಸ್ಪರ್ಧೆಯ ಮೊತ್ತ ಇಡಲಾಗಿದೆ ಎಂದರು.

ಬೆಂಗಳೂರು ಓಪನ್ ಕಾರ್ಯಕ್ರಮವನ್ನು ಅದ್ದೂರಿಯಾಗಿ ಉದ್ಘಾಟಿಸುವ ಯೋಜನೆ ಇತ್ತು. ಆದರೆ ಅನಂತಕುಮಾರ್ ಅವರ ನಿಧನದ ಹಿನ್ನೆಲೆಯಲ್ಲಿ ಅವರಿಗೆ ಗೌರವಾರ್ಥವಾಗಿ ಸರಳವಾಗಿ ಉದ್ಘಾಟಿಸಲಾಗಿದೆ. ಆದರೂ ಟೂರ್ನಮೆಂಟ್‌ನಲ್ಲಿ ಭಾಗವಹಿಸುವ ಎಲ್ಲ ಆಟಗಾರರು ಉತ್ತಮ ಆಟ ಪ್ರದರ್ಶಿಸಬೇಕು ಎಂದು ಶುಭ ಕೋರಿದರು.

## ಕೊಡಗು ಸಂತ್ರಸ್ತ ಮಕ್ಕಳ ವಿದ್ಯಾಭ್ಯಾಸದ ಹೊಣೆ ಹೊತ್ತ ಬೆನಕ ತಂಡ

**ಬೆಂಗಳೂರು:** ಕೊಡಗಿನಲ್ಲಿ ಸಂತ್ರಸ್ತ ಮಕ್ಕಳ ವಿದ್ಯಾಭ್ಯಾಸದ ಖರ್ಚನ್ನು ವಹಿಸಿಕೊಳ್ಳುವುದಾಗಿ ನಿರ್ದೇಶಕ, ಬೆನಕ ತಂಡದ ರೂವಾರಿ ಟಿ.ಎ. ನಾಗಾಭರಣ ತಿಳಿಸಿದರು.

ಕೊಡಗಿನ ಸಂಕಷ್ಟಗಳಿಗೆ ಧ್ವನಿಯಾಗುವ ಉದ್ದೇಶದಿಂದ ಮಲ್ಲತ್ತಹಳ್ಳಿಯ ಕಲಾಗ್ರಾಮದಲ್ಲಿ ಪೀಪಲ್ ಫಾರ್ ಪೀಪಲ್ ತಂಡ ಆಯೋಜಿಸಿರುವ ಕೊಡಗಿಗಾಗಿ ರಂಗ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಉತ್ತಮವಾದ ಕೆಲಸವನ್ನು ಈ ತಂಡ ಮಾಡುತ್ತಿದೆ. ನನ್ನಿಂದಾದ ಸಹಾಯವನ್ನು ನಾನು ಮಾಡುತ್ತೇನೆ. ಮೊದಲನೆಯದಾಗಿ ಸಂತ್ರಸ್ತ ಮಕ್ಕಳ ವಿದ್ಯಾಭ್ಯಾಸದ ಖರ್ಚನ್ನು ಭರಿಸುತ್ತೇನೆ ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಎ.ಪಿ. ರಂಗನಾಥ್ ಮಾತನಾಡಿ, ದೇಶಾದ್ಯಂತ ಕೊಡಗಿನಲ್ಲಿ ನಡೆದ ಪ್ರವಾಹಕ್ಕೆ ಜನರು ಮಿಡಿದಿದ್ದಾರೆ. ಸರ್ಕಾರ ಕೂಡ ತನ್ನ ಶಕ್ತಿ ಮೀರಿ ಕೆಲಸ ಮಾಡಿದೆ. ನಮ್ಮ ಸಂಘ ನೆರವು ನೀಡಿದೆ. ತಂಡದ ಸಮಾಜಮುಖಿ ಕಾರ್ಯ ಶ್ಲಾಘನೀಯ ಎಂದು ತಿಳಿಸಿದರು. ಸಂಚಾರಿ ತಂಡದ ಮುಖ್ಯಸ್ಥೆ ಮಂಗಳಾ ಮಾತನಾಡಿ, ನಿರಂತರವಾಗಿ ಪರಿಸರವಾಗಿ ಮೇಲೆ ನಡೆದ ದೌರ್ಜನ್ಯದ ಪರಿಣಾಮ ಕೊಡಗಿನ ಮೇಲಾಗಿದೆ. ಇದು ಎಚ್ಚರಿಕೆಯ ಗಂಟೆ, ಜನ ಈಗಲೂ ಎಚ್ಚೆತ್ತುಕೊಳ್ಳದಿದ್ದರೆ ಮುಂದೆ ಘೋರ ದುರಂತ ಎದುರಾಗಲಿದೆ ಎಂದು ಹೇಳಿದರು. ಪೀಪಲ್ ಫಾರ್ ಪೀಪಲ್ ತಂಡ ಕೊಡಗಿನ ಜನರ ಬದುಕನ್ನು ಕಟ್ಟಿಕೊಡುವ ಕೆಲಸ ಮಾಡುತ್ತಿದೆ.

ಇದು ಅತ್ಯಂತ ಶ್ರೇಷ್ಠವಾದದ್ದು ಎಂದರು. ಕಾರ್ಯಕ್ರಮದಲ್ಲಿ ಹಾಜರಿದ್ದ ಕೊಡಗಿನ ನಿರಾಶ್ರಿತರಾದ ಭವಾನಿ ಮತ್ತು ಲಲಿತಾ ತಮ್ಮ ಅನುಭವಗಳನ್ನು ಹಂಚಿಕೊಂಡರಲ್ಲದೆ, ತಮ್ಮ ಕುಟುಂಬಕ್ಕೆ ಜೀವನಾಧಾರವಾಗಿದ್ದ ಎರಡು ಎಕರೆ ಕಾಫಿ ತೋಟ ಸರ್ವನಾಶವಾಗಿದೆ. ಮುಂದೇನು ಎಂಬ ಚಿಂತೆ ಕಾಡುತ್ತಿದೆ ಎಂದು ಅಲವತ್ತುಗೊಂಡರು. ಯುವ ನಿರ್ದೇಶಕ ಕೆ.ಎಂ.ಚೇತನ್ಯ, ತಂಡದ ವಿಶ್ವಾಸ್ ಭಾರದ್ವಾಜ್, ಪ್ರಸ್ತಾವನಾ, ಸದಸ್ಯರಾದ ಅಂಬಿಕಾ, ನಿರ್ದೇಶಕ ಚಕ್ರವರ್ತಿ ಚಂದ್ರಚೂಡ್, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ರಸ್ತೆ ಬದಿಯಲ್ಲಿ ಮೂತ್ರ ವಿಸರ್ಜಿಸುತ್ತಿದ್ದ ಪ್ರವಾಸಿಗನಿಗೆ ಬೈಕ್ ಡಿಕ್ಕಿ: ಸ್ಥಳದಲ್ಲೇ ಸಾವು

**ಚಾಮರಾಜನಗರ:** ರಸ್ತೆ ಬದಿಯಲ್ಲಿ ಮೂತ್ರ ವಿಸರ್ಜಿಸುತ್ತಿದ್ದ ಪ್ರವಾಸಿಗನೊಬ್ಬನಿಗೆ ಬೈಕ್ ಡಿಕ್ಕಿಯಾಗಿ ಆತ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಗುಂಡ್ಲುಪೇಟೆ ತಾಲ್ಲೂಕಿನ ಕಲಿಗೌಡನಹಳ್ಳಿ ಗೇಟ್ ಬಳಿ ನಡೆದಿದೆ.

ಆಂಧ್ರ ಮೂಲದ ನಿಕಿಲ್ ಭೀಮರಾವ್ ಮೃತ ವ್ಯಕ್ತಿ. ಕುಟುಂಬ ಸಮೇತರಾಗಿ ಊಟಿ ಪ್ರವಾಸ ಮುಗಿಸಿಕೊಂಡು ಹಿಂತಿರುಗುವಾಗ ವಿಶ್ರಾಂತಿಗೆಂದು ಗೇಟ್ ಬಳಿ ನಿಲ್ಲಿಸಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ. ಬೈಕ್ ಸವಾರರು ಕುಡಿದಿದ್ದರು ಎಂದು ತಿಳಿದುಬಂದಿದ್ದು ತಿರುವಿನಲ್ಲಿ ವೇಗವಾಗಿ ಬಂದು ಗುದ್ದಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ಈನಾಡು ಇಂಡಿಯಾಗೆ ಮಾಹಿತಿ ನೀಡಿದ್ದಾರೆ. ಬೈಕ್ ಸವಾರನನ್ನು ಬಂಧಿಸಲಾಗಿದ್ದು, ಹಿಂಬದಿ ಸವಾರ ಪರಾರಿಯಾಗಿದ್ದಾನೆ. ಗುಂಡ್ಲುಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಕಲಿ ಚಿನ್ನ ನೀಡಿ ವಂಚನೆ: ಆರೋಪಿಗಳ ಸೆರೆ

**ದಾವಣಗೆರೆ:** ಬೆಂಗಳೂರು ಮೂಲದ ವ್ಯಕ್ತಿಯೊಬ್ಬರಿಗೆ ನಕಲಿ ಬಂಗಾರ ನೀಡಿ ವಂಚಿಸಿದ್ದ ಇಬ್ಬರು ಆರೋಪಿಗಳನ್ನು ಕೆ.ಟಿ.ಜೆ. ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಹರಪನಹಳ್ಳಿ ತಾಲ್ಲೂಕಿನ ಮಾಚೇನಹಳ್ಳಿ ಕೊರಚರಹಟ್ಟಿಯ ವೆಂಕಟೇಶ್ ಎಂ. (32) ಹಾಗೂ ಲಕ್ಕಪ್ಪ (55) ಬಂಧಿತ ಆರೋಪಿಗಳು. ಇವರಿಂದ 5.30 ಲಕ್ಷ ರೂಪಾಯಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ನಗರದ ಎಪಿಎಂಸಿ ಫ್ಲೈಓವರ್ ಬಳಿ ಅ. 30ರಂದು ಆರೋಪಿಗಳು ಬೆಂಗಳೂರಿನ ವೈದ್ಯನಾಥನ್ ಎಂಬುವವರಿಗೆ ನಕಲಿ ಚಿನ್ನ ನೀಡಿ, 5.30 ಲಕ್ಷ ರೂ. ಪಡೆದು ವಂಚಿಸಿದ್ದು, ಇದೀಗ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾರೆ. ಕೆಟಿಜೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಕ್ಕಳ ದಿನಾಚರಣೆ: 12 ವರ್ಷದೊಳಗಿನ ಮಕ್ಕಳಿಗೆ ಮೃಗಾಲಯಕ್ಕೆ ಉಚಿತ ಪ್ರವೇಶ



**ಮೈಸೂರು:** ಮಕ್ಕಳ ದಿನಾಚರಣೆ ಪ್ರಯುಕ್ತ ಇಂದು 12 ವರ್ಷದೊಳಗಿನ ಮಕ್ಕಳಿಗೆ ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ಉಚಿತ ಪ್ರವೇಶ ಕಲ್ಪಿಸಲಾಗಿದೆ.

ಬೆಳಿಗ್ಗೆ 8.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮಾತ್ರ 12 ವರ್ಷದೊಳಗಿನ ಮಕ್ಕಳಿಗೆ ಮಾತ್ರ ಉಚಿತ ಪ್ರವೇಶ ಕಲ್ಪಿಸಲಾಗಿದ್ದು, ಮಕ್ಕಳೊಂದಿಗೆ ಮೃಗಾಲಯಕ್ಕೆ ಬರುವ ಶಿಕ್ಷಕರು ಮತ್ತು ಪೋಷಕರು ಪ್ರವೇಶ ಶುಲ್ಕವನ್ನು ಭರಿಸಬೇಕೆಂದು ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ತಿಳಿಸಿದ್ದಾರೆ.


NATIONAL RURAL HEALTH MISSION
ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ
ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಛೇರಿ, ಬೆಂಗಳೂರು ನಗರ ಜಿಲ್ಲೆ

राष्ट्रीय वैक्टर जनित रोग नियंत्रण कार्यक्रम NVBDCP
ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ

**ಸಾರ್ವಜನಿಕರೇ ಗಮನಿಸಿ**
**ಡೆಂಗೀ ಹಾಗೂ ಚಿಕೂನ್‌ಗುನ್ಯ ನಿಯಂತ್ರಣಕ್ಕೆ ಸಹಕರಿಸಿ**

ಡೆಂಗೀ ಹಾಗೂ ಚಿಕೂನ್‌ಗುನ್ಯ ಜ್ವರಗಳು ಸೋಂಕು ಹೊಂದಿದ ಈಡೀಸ್ ಈಜಿಪ್ಟೈ ಎಂಬ ಸೊಳ್ಳೆಯ ಕಡಿತದಿಂದ ಬರುತ್ತದೆ. ನಿಂತ ಸ್ವಚ್ಛ ನೀರಿನಲ್ಲಿ ಹುಟ್ಟುವ ಈ ಸೊಳ್ಳೆ ಸಾಧಾರಣವಾಗಿ ಹಗಲಿನಲ್ಲಿ ಕಚ್ಚುತ್ತದೆ. ಈಡೀಸ್ ಈಜಿಪ್ಟೈ ಸೊಳ್ಳೆಯು ತನ್ನ ಜೀವನ ಚಕ್ರವನ್ನು ಪೂರ್ಣಗೊಳಿಸಲು ಸುಮಾರು 8 ರಿಂದ 10 ದಿನಗಳನ್ನು ತಗೆದುಕೊಳ್ಳುತ್ತದೆ. 7 ದಿನಗಳ ಮೊದಲ 3 ಹಂತಗಳು ಚಿತ್ರದಲ್ಲಿ ತೋರಿಸಿದಂತೆ ಹೀಗಿವೆ. ಮೊಟ್ಟೆ, ಲಾರ್ವ, ಪ್ಯೂಪ ಈ ಪ್ರಕ್ರಿಯೆಯು ನೀರಿನಲ್ಲಿ ನಡೆಯುತ್ತದೆ.

**ಲಕ್ಷಣಗಳು :** ಹಠಾತ್ತನೆ ಬರುವ ಅಧಿಕ ಜ್ವರ, ತೀವ್ರ ತಲೆನೋವು, ಕಣ್ಣುಗಳ ಹಿಂಬಾಗಲ್ಲಿ ತೀವ್ರತರ ನೋವು, ಮೈ ನೋವು, ಕೀಲುಗಳಲ್ಲಿ ನೋವು, ವಾಕರಿಕೆ ಮತ್ತು ವಾಂತಿ

**ವೈದ್ಯಕೀಯ ಉಪಚಾರ :** ರೋಗದ ಲಕ್ಷಣ ಕಂಡೊಡನೆ ಉಚಿತ ಚಿಕಿತ್ಸೆಗಾಗಿ ಹತ್ತಿರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಸ್ಪತ್ರೆಯನ್ನು ಸಂಪರ್ಕಿಸಿ, ವೈದ್ಯರಿಂದ ಪರೀಕ್ಷೆ ಮಾಡಿಸಿ ಸೂಕ್ತ ಚಿಕಿತ್ಸೆ ಪಡೆಯಿರಿ.


**ಮುನ್ನೆಚ್ಚರಿಕೆ :** ಚಿತ್ರದಲ್ಲಿ ತೋರಿಸಿದಂತೆ ಸಿಮೆಂಟ್ ತೊಟ್ಟಿಗಳು, ಪ್ಲಾಸ್ಟಿಕ್ ತೊಟ್ಟಿಗಳು, ಬಕೆಟ್‌ಗಳು, ಡ್ರಂಗಳು, ಬ್ಯಾರಲ್‌ಗಳು, ಖಾಲಿ ಡಬ್ಬಗಳು, ಏರ್‌ಕೂಲರ್‌ಗಳು, ಗಡಿಗೆ. ಗಡಿಗೆ ತುಂಡುಗಳು, ತೆಂಗಿನ ಚಿಪ್ಪುಗಳು, ಹಳೆಯ/ಒಡೆದ ಟೈರ್‌ಗಳು, ಹೀಗೆ ಎಲ್ಲೆಲ್ಲಿ ಸ್ವಚ್ಛನೀರು ನಿಲ್ಲಬಹುದೋ ಅಲ್ಲೇಲ್ಲಾ ಈ ಸೊಳ್ಳೆಗಳು ಹೇರಳವಾಗಿ ಉತ್ಪತ್ತಿಯಾಗುತ್ತವೆ. ಎಲ್ಲಾ ನೀರಿನ ತೊಟ್ಟಿಗಳು, ಡ್ರಂ, ಬ್ಯಾರಲ್‌ಗಳು, ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛಪಡಿಸಿ. ಮತ್ತೆಭರ್ತಿ ಮಾಡಿಕೊಳ್ಳುವುದು/ಮುಚ್ಚಳದಿಂದ ಮುಚ್ಚುವುದು, ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆ ನೀರು ಸಂಗ್ರಹವಾಗದಂತೆ ಎಚ್ಚರವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು ಅತ್ಯಗತ್ಯ.

ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವುದು.

ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಯನ್ನು ಬಳಸುವುದು ಹಾಗೂ ಹಗಲಿನಲ್ಲಿ ಸೊಳ್ಳೆಗಳ ಕಚ್ಚುವಿಕೆಯಿಂದ ದೂರವಿರುವುದು.




ಸೊಳ್ಳೆ ಉತ್ಪತ್ತಿ ತಾಣಗಳು : • ಒಡೆದ ಟೈರ್‌ಗಳು • ತೆಂಗಿನ ಚಿಪ್ಪುಗಳು • ಸಿಮೆಂಟ್ ತೊಟ್ಟಿಗಳು • ತೆರೆದ ಪ್ಲಾಸ್ಟಿಕ್ ಡ್ರಂ • ತೊಟ್ಟಿಗಳು • ಬಕೆಟ್‌ಗಳು • ನೀರಿನ ತೊಟ್ಟಿಗಳು • ಏರ್ ಕೂಲರ್‌ಗಳು • ಹೂವಿನ ಕುಂಡಗಳ ತಟ್ಟೆಗಳು ಇತ್ಯಾದಿಗಳು.




ನೀರು ನಿಲ್ಲದಂತೆ ಸಹಕರಿಸಿ – ಸೊಳ್ಳೆ ಉತ್ಪತ್ತಿ ತಡೆಗಟ್ಟಿರಿ

ಅಧ್ಯಕ್ಷರು, ಉಪಾಧ್ಯಕ್ಷರು
ಕನ್ನಮಂಗಲ ಗ್ರಾಮ ಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು.
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು.

ಕನ್ನಮಂಗಲ ಗ್ರಾಮ ಪಂಚಾಯಿತಿ
ಎಲ್ಲಾ ಸದಸ್ಯರುಗಳು
ಆಡಳಿತ ವೈದ್ಯಾಧಿಕಾರಿಗಳು
ಪ್ರಾಥಮಿಕ ಆರೋಗ್ಯ ಕೇಂದ್ರ,




NATIONAL HEALTH MISSION

ಕರ್ನಾಟಕ ಸರ್ಕಾರ


ಜಿಲಾಡಳಿತ, ಜಿಲ್ಲಾ ಪಂಚಾಯತ್
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ

**ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನ**

22ನೇ ಅಕ್ಟೋಬರ್ ನಿಂದ 4ನೇ ನವೆಂಬರ್ 2018 ರವರೆಗೆ

ಕೈ ಕೈ ಜೋಡಿಸಿ,  ಕುಷ್ಠ ನಿವಾರಿಸಿ





- ಕುಷ್ಠರೋಗವು ಮೈಕೋಬ್ಯಾಕ್ಟೀರಿಯಂ ಲೆಪ್ರ ಎಂಬ ರೋಗಾಣುವಿನಿಂದ ಬರುತ್ತದೆ.
- ದೇಹದ ಮೇಲೆ ಯಾವುದೇ ಸ್ಪರ್ಶ ಜ್ಞಾನವಿಲ್ಲದ ತಿಳಿಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು ಕಾಣಿಸುವುದು.
- ಕೈ ಕಾಲುಗಳಲ್ಲಿ ಜೋಮು ಹಿಡಿದು ಸ್ಪರ್ಶ ಜ್ಞಾನವಿಲ್ಲದಿರುವುದು.
- ಮುಖ ಅಥವಾ ಕೈ ಕಾಲುಗಳಲ್ಲಿ ಎಣ್ಣೆ ಸವರಿದಂತೆ ಹೊಳಪು ಇರುವುದು.
- ಮೇಲ್ಕಂಡ ಚಿಹ್ನೆಗಳು ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷಿಸಿಕೊಳ್ಳಿರಿ.
- ರೋಗವನ್ನು ಬಹು ಔಷಧಿ ಚಿಕಿತ್ಸೆಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು.
- ಈ ಬಹು ಔಷಧಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ದೊರೆಯುತ್ತದೆ.
  ಪ್ರಾರಂಭಿಕ ಹಂತದಲ್ಲಿ ಗುರ್ತಿಸಿ ಕ್ರಮ ಬದ್ದ ಚಿಕಿತ್ಸೆ ಪಡೆದಲ್ಲಿ ಅಂಗವಿಕಲತೆ ತಡೆಗಟ್ಟಬಹುದು.
- ಚಿಹಿತ್ಸೆ ಅವಧಿ ಕೇವಲ 6 ತಿಂಗಳು ಅಥವಾ 12 ತಿಂಗಳು ಹಾಗೂ ಮನೆಯಲ್ಲಿಯೇ ಚಿಕಿತ್ಸೆ ಪಡೆಯಬಹುದು.
- ಬಹು ಔಷಧಿ ಚಿಕಿತ್ಸೆ : ಉಚಿತ – ಸರಳ ಹಾಗೂ ಪರಿಣಾಮಕಾರಿ

ಉಚಿತವಾಗಿ ಬಹು ಔಷಧಿ ಚಿಕಿತ್ಸೆ ಪಡೆಯುತಿ ಕುಷ್ಠರೋಗವನ್ನು ತೊಲಗಿಸಿರಿ

ಹೆಚ್ಚಿನ ವಿವರಗಳಿಗೆ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರನ್ನು ಅಥವಾ ಸಿಬ್ಬಂದಿವರ್ಗದವರನ್ನು ಸಂಪರ್ಕಿಸುವುದು.
ಹೆಚ್ಚಿನ ಮಾಹಿತಿಗಾಗಿ 104 ಸಂಖ್ಯೆಗೆ ಉಚಿತ ದೂರವಣಿ ಕರೆ ಮಾಹಿತಿ ಪಡೆಯುವುದು.

ಪ್ರಕಟಣೆ :
ಅಧ್ಯಕ್ಷರು /ಉಪಾಧ್ಯಕ್ಷರು /ಸದಸ್ಯರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
ಕನ್ನಮಂಗಲ ಗ್ರಾಮ ಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು.